# ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ನಿಯಮಿತ

**ಕಾರ್ಯನಿರ್ವಾಹಕ ಕಛೇರಿ, ನೆಲಮಹಡಿ, ಬಿ.ಎಂ.ಟಿ.ಸಿ, ಯಶವಂತಪುರ, ಟಿ.ಟಿ.ಎಂ.ಸಿ ಬಸ್ ನಿಲ್ದಾಣ,**
**ಯಶವಂತಪುರ ವೃತ್ತ, ಬೆಂಗಳೂರು–560 022.**

**ದೂರವಾಣಿ: 080–43344334 ಫ್ಯಾಕ್ಸ್: (080) 43344376, ವೆಬ್‌ಸೈಟ್: www.kstdc.co**


---

ಸಂಖ್ಯೆ: ಕರಾಪ್ರಅನಿ/28/ಆಡಳಿತ/2018–19/1321 ದಿನಾಂಕ: 15.10.2018

## ಅಧಿಸೂಚನೆ

ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮವು, ಗುತ್ತಿಗೆ ಆಧಾರದ ಮೇಲೆ ವಿವಿಧ ಹುದ್ದೆಗಳ ನೇಮಕಾತಿಗಾಗಿ ಆಸಕ್ತ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿದ್ದು, ಹುದ್ದೆಗಳ ವಿವರ ಕೆಳಕಂಡತಿರುತ್ತದೆ.

| **ಕ್ರ.ಸಂ** | **ಹುದ್ದೆಗಳ ವಿವರ** | **ಹುದ್ದೆಗಳ ಸಂಖ್ಯೆ** |
|---|---|---|
| 1. | ಸಹಾಯಕ ವ್ಯವಸ್ಥಾಪಕರು(ಹಣಕಾಸು) | 05 |
| 2. | ಸಹಾಯಕ ವ್ಯವಸ್ಥಾಪಕರು (ಹೋಟೆಲ್ಸ್) | 05 |
| | **ಒಟ್ಟು ಹುದ್ದೆಗಳು** | **10** |

**ಈ ಮೇಲ್ಕಂಡ ಹುದ್ದೆಗಳಿಗೆ ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನಾಂಕ: 31.10.2018.**

ಸಹಿ/–
ವ್ಯವಸ್ಥಾಪಕ ನಿರ್ದೇಶಕರು

**ಷರತ್ತು ಮತ್ತು ನಿಬಂಧನೆಗಳು:**

- ಅರ್ಹ ಅಭ್ಯರ್ಥಿಗಳು ನಿಗಧಿತ ನಮೂನೆಯಲ್ಲಿ ತಮ್ಮ ಸ್ವವಿವರವನ್ನು ಭರ್ತಿ ಮಾಡಿ, ವಿದ್ಯಾರ್ಹತೆ (Education qualification certificates) ಮತ್ತು ಸೇವಾ ಅನುಭವ ದಾಖಲೆಗಳು (Work Experience Certificates) ಮತ್ತು ಇತ್ತೀಚಿನ ಭಾವಚಿತ್ರದೊಂದಿಗೆ ದಿನಾಂಕ: 31.10.2018 ರೊಳಗೆ ಈ ಕೆಳಕಂಡ ವಿಳಾಸಕ್ಕೆ ಸಲ್ಲಿಸತಕ್ಕದ್ದು.

  ವ್ಯವಸ್ಥಾಪಕರು (ಆಡಳಿತ)
  ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ನಿ.,
  ಕಾರ್ಯನಿರ್ವಾಹಕ ಕಛೇರಿ,
  ನೆಲಮಹಡಿ, ಯಶವಂತಪುರ ಟಿಟಿಎಂಸಿ,
  ಬಿ.ಎಂ.ಟಿ.ಸಿ ಬಸ್ ನಿಲ್ದಾಣ,
  ಯಶವಂತಪುರ ವೃತ್ತ,
  ಬೆಂಗಳೂರು–560 022.

- ಅಭ್ಯರ್ಥಿಗಳು ದಾಖಲಾತಿಗಳನ್ನೊಳಗೊಂಡ ಅರ್ಜಿಯನ್ನು ಮುಚ್ಚಿದ ಲಕೋಟೆ (Sealed Cover) ಸ್ಪೀಡ್ ಪೋಸ್ಟ್/ರಿಜಿಸ್ಟರ್ ಪೋಸ್ಟ್/ ಕೋರಿಯರ್ ಅಥವಾ ನೇರವಾಗಿ ಮೇಲೆ ತಿಳಿಸಿದ ವಿಳಾಸಕ್ಕೆ ಬಂದು ಸಲ್ಲಿಸಬಹುದಾಗಿದೆ.
- ಅಭ್ಯರ್ಥಿಗಳು ತಾವು ಅರ್ಜಿ ಸಲ್ಲಿಸುತ್ತಿರುವ ಹುದ್ದೆಯ ಪದನಾಮವನ್ನು ಲಕೋಟೆ/ಪೋಸ್ಟ್ ಕವರ್‌ನ ಮೇಲೆ ನಮೂದಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.
- ಅಭ್ಯರ್ಥಿಯು ಕೇವಲ ಒಂದು ಹುದ್ದೆಗೆ ಮಾತ್ರ ಅರ್ಜಿ ಸಲ್ಲಿಸತಕ್ಕದ್ದು, ಒಂದಕ್ಕಿಂತ ಹೆಚ್ಚಿನ ಹುದ್ದೆಗೆ ಅರ್ಜಿ ಸಲ್ಲಿಸಿರುವುದು ಕಂಡು ಬಂದಲ್ಲಿ ಅಂತಹ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.
- ದಿನಾಂಕ: 31.10.2018 ರ ನಂತರದಲ್ಲಿ ಸ್ವೀಕೃತಗೊಂಡ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ.
- ನಿಗಮವು ಯಾವುದೇ ಕಾರಣವನ್ನು ನೀಡದೆ ಅರ್ಜಿಯನ್ನು ಸ್ವೀಕರಿಸಲು ಅಥವಾ ತಿರಸ್ಕರಿಸುವ ಸಂಪೂರ್ಣ ಅಧಿಕಾರವನ್ನು ಹೊಂದಿರುತ್ತದೆ.
- ನಿಗಮವು ನೀಡಿರುವ ನಮೂನೆಯಲ್ಲದೇ, ಇತರೆ ಯಾವುದೇ ನಮೂನೆಯಲ್ಲಿ ಸ್ವವಿವರವನ್ನು ಸಲ್ಲಿಸಿದರೆ ಯಾವುದೇ ಕಾರಣಕ್ಕೂ ಅಂತಹ ಅರ್ಜಿಯನ್ನು ತಿರಸ್ಕರಿಸಲಾಗುವುದು.

**ಮಾಹಿತಿ:**

- ಅನುಬಂಧ–1 ರಲ್ಲಿ ಹುದ್ದೆಗಳ ವಿವರ, ವಿದ್ಯಾರ್ಹತೆ ಮತ್ತು ಸೇವಾನುಭವದ ವಿವರವನ್ನು ನೀಡಲಾಗಿದೆ.
- ಅನುಬಂಧ–2 ರಲ್ಲಿ ಸ್ವ–ವಿವರದ ನಮೂನೆಯನ್ನು (Application Form) ನೀಡಲಾಗಿದ್ದು, ಸದರಿ ನಮೂನೆಯಲ್ಲಿಯೇ ಅರ್ಜಿಯನ್ನು ಸಲ್ಲಿಸತಕ್ಕದ್ದು.
- ವರ್ಗೀಕರಿಸಲಾದ ಪಟ್ಟಿಯಲ್ಲಿನ ಅಭ್ಯರ್ಥಿಗಳನ್ನು ಅಭ್ಯರ್ಥಿಗಳ ವಿದ್ಯಾರ್ಹತೆ, ಅನುಭವ ಹಾಗೂ ಪರಿಣತಿಯನ್ನು ಆಧರಿಸಿ, 1:3 ಅನುಪಾತದಲ್ಲಿ ನಿಗದಿಪಡಿಸಲಾಗುವುದು.
- ಈ ಮೇಲ್ಕಂಡ ಅನುಪಾತದಲ್ಲಿ ಆಯ್ಕೆಯಾದ ಅಭ್ಯರ್ಥಿಗಳ ದಾಖಲಾತಿ ಪರಿಶೀಲನೆ ಮತ್ತು ಸಂದರ್ಶನ ಕೈಗೊಳ್ಳಲು ದಿನಾಂಕವನ್ನು ನಿಗದಿಪಡಿಸಿ, ಅಭ್ಯರ್ಥಿಗಳಿಗೆ ಮಾಹಿತಿಯನ್ನು ನೀಡಲಾಗುವುದು.
- ಸದರಿ ಹುದ್ದೆಗಳನ್ನು ಒಂದು ವರ್ಷದ ಅವಧಿಗೆ ಮಾತ್ರ ಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳಲಾಗುವುದು.

## ಅನುಬಂಧ–1

## ಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳುವ ಹುದ್ದೆಗಳ ವಿವರ–ವಿದ್ಯಾರ್ಹತೆ, ಸೇವಾನುಭವ

| ಕ್ರ.ಸಂ | ಹುದ್ದೆಗಳು | ಅನುಮೋದನೆಗೊಂಡ ಹುದ್ದೆಗಳ ಸಂಖ್ಯೆ | ಅಧಿಸೂಚನೆ ಹೊರಡಿಸಿದ ದಿನಾಂಕಕ್ಕೆ ವಯೋಮಿತಿ | ವಿದ್ಯಾರ್ಹತೆ | ಸೇವಾನುಭವ | ಷರಾ |
|---|---|---|---|---|---|---|
| 1 | ಸಹಾಯಕ ವ್ಯವಸ್ಥಾಪಕರು (ಹಣಕಾಸು) | 05 | 25 ರಿಂದ 50 ವರ್ಷಗಳು | ಬಿ.ಕಾಂ/ಬಿ.ಬಿ.ಎಂ/ ಎಂ.ಕಾಂ/ಎಂ.ಬಿ.ಎ (ಹಣಕಾಸು) | • ಸರ್ಕಾರಿ/ಖಾಸಗಿ ಸಂಸ್ಥೆಗಳ ಹಣಕಾಸು ವಿಭಾಗದಲ್ಲಿ ಕನಿಷ್ಠ 5 ವರ್ಷಗಳ ಅನುಭವವನ್ನು ಹೊಂದಿದ ಪದವೀಧರರು ಅಥವಾ 3 ವರ್ಷಗಳ ಅನುಭವವನ್ನು ಹೊಂದಿರುವ ಸ್ನಾತಕೋತ್ತರ ಪದವೀಧರರಾಗಿರುವುದು ಕಡ್ಡಾಯವಾಗಿದೆ.<br>• ಯಾವುದಾದರೂ ಚಾರ್ಟರ್ಡ್ ಅಕೌಂಟೆಂಟ್ಸ್ (ಸಿ.ಎ) ಸಂಸ್ಥೆಗಳಲ್ಲಿ ಆರ್ಟಿಕಲ್‌ಶಿಪ್ ಆಗಿರುವಂತಹ ಹಾಗೂ ಸಿ.ಎ/ಸಿಎಂಎ/ಸಿಎಸ್ ಗಳನ್ನು ಮುಗಿಸಿರುವಂತಹ ಅಭ್ಯರ್ಥಿಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗುವುದು.<br>• ಕರ್ನಾಟಕ ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮ ನಿಯಮಿತ (ಕಿಯೋನಿಕ್ಸ್) ಸಂಸ್ಥೆಯಿಂದ ಕಂಪ್ಯೂಟರ್ ಟ್ಯಾಲಿ ಇಆರ್‌ಪಿ–9 ಕೋರ್ಸ್ ಹೊಂದಿರಬೇಕು ಅಥವಾ ತತ್ಸಮಾನವಾಗಿ ಕನಿಷ್ಠ 3 ತಿಂಗಳ ಪ್ರಮಾಣೀಕೃತ ಕೋರ್ಸ್‌ನ್ನು ಕಡ್ಡಾಯವಾಗಿ ಹೊಂದಿರಬೇಕು. | |
| 2 | ಸಹಾಯಕ ವ್ಯವಸ್ಥಾಪಕರು (ಹೋಟೆಲ್ಸ್) | 05 | 22 ರಿಂದ 50 ವರ್ಷಗಳು | ಹೋಟೆಲ್ ನಿರ್ವಹಣೆಯ ಕುರಿತು ಡಿಪ್ಲೋಮಾ ಪದವಿ ಹೊಂದಿರಬೇಕು(ಬಿಹೆಚ್ ಎಂ/ ಬಿಎಸ್‌ಸಿ– ಹೋಟೆಲ್ ಮ್ಯಾನೇಜ್‌ಮೆಂಟ್) | • ಆತಿಥ್ಯ ಕ್ಷೇತ್ರದಲ್ಲಿ ಕಡ್ಡಾಯವಾಗಿ ಕನಿಷ್ಠ 3 ವರ್ಷ ಸೇವೆ ಸಲ್ಲಿಸಿದ ಅನುಭವವನ್ನು ಹೊಂದಿರಬೇಕು.<br>• 20 ಕೊಠಡಿಗಳಿಗೆ ಕಡಿಮೆ ಇಲ್ಲದ ಪ್ರತಿಷ್ಠಿತ ಹೋಟೆಲ್‌ಗಳಲ್ಲಿ ವ್ಯವಸ್ಥಾಪಕರು ಅಥವಾ ಸಹಾಯಕ ವ್ಯವಸ್ಥಾಪಕರಾಗಿ ಕಡ್ಡಾಯವಾಗಿ ಕನಿಷ್ಠ 1 ವರ್ಷಗಳ ಸೇವೆ ಸಲ್ಲಿಸಿದ ಅನುಭವ ಹೊಂದಿರಬೇಕು. | |